**1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂಃ ರವರ ನ್ಯಾಯಾಲಯ, ಮೂಡಿಗೆರೆ**

**ಸಿ.ಸಿ.746/2022**

| | | |
|---|---|---|
| ಸಾಕ್ಷಿದಾರರ ಹೆಸರು | : ಚಂದ್ರಪ್ರಭ | ಪ್ರಾಸಾ-4 |
| ಗಂಡನ ಹೆಸರು | : ರಾಮ್ ಪ್ರಸಾದ್ ಹೆಚ್.ಜಿ | ಚಾಸಾ-9 |
| ವಯಸ್ಸು | : 40 ವರ್ಷ | ಪ್ರಮಾಣ ವಚನ ಬೋಧಿಸಲಾದ |
| ಉದ್ಯೋಗ | : ಸ್ತ್ರೀ ರೋಗ ಮತ್ತು ಪ್ರಸೂತಿ ತಜ್ಞೆ | ದಿನಾಂಕಃ 03.03.2026. |
| ವಾಸಸ್ಥಳ | : ಎನ್.ಆರ್ ಪುರ | |

**:ಮುಖ್ಯ ವಿಚಾರಣೆಃ ಪ್ರಾಜ್ಞ್ಯಾಸ.ಸ.ಅ. ರವರಿಂದ:**

ನಾನು ಡಿಸೆಂಬರ್ 2015 ರಿಂದ ಇಲ್ಲಿಯವರೆಗೂ ಎನ್.ಆರ್ ಪುರ ಆರೋಗ್ಯ ಕೇಂದ್ರದಲ್ಲಿ ಸ್ತ್ರೀ ರೋಗ ಮತ್ತು ಪ್ರಸೂತಿ ತಜ್ಞೆ ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿ.08.06.2022 ರಂದು ಕಳಸ ಪೋಲಿಸ್ ಠಾಣೆಯವರಿಂದ ಚಾಸಾ-1 ರವರ ಗಾಯದ ಪ್ರಮಾಣ ಪತ್ರವನ್ನು ನೀಡುವಂತೆ ಮನವಿಯನ್ನು ಸ್ವೀಕರಿಸಿಕೊಂಡಿರುತ್ತೇನೆ. ಅದೇ ದಿನ ಗಾಯದ ಪ್ರಮಾಣ ಪತ್ರವನ್ನು ನೀಡಿರುತ್ತೇನೆ. ನಿಪಿ-9 ನ್ನು ಪರಿಶೀಲಿಸಿದ ಪ್ರಕಾರ ಚಾಸಾ-1 ರವರಿಗೆ ಎಡಗಾಲಿನಲ್ಲಿ ಊತ ಇರುವುದು ಕಂಡುಬಂದಿರುತ್ತದೆ. ಮೂಳೆ ತಜ್ಞರ ಅಭಿಪ್ರಾಯದ ಪ್ರಕಾರ ಎಡಭಾಗದ ಫ್ಯುಬುಲಾ ಎಂಬ ಮೂಳೆಯು ಮುರಿದಿರುವುದು ತಿಳಿದು ಬಂದಿರುತ್ತದೆ. ಸದರಿ ಗಾಯವು ತೀವ್ರ ಸ್ವರೂಪದ ಗಾಯಗಳಾಗಿರುತ್ತವೆ.

ಸಾಕ್ಷಿಯು ನಿಪಿ-9 ರಲ್ಲಿರುವ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ-9(ಬಿ) ಎಂದು ಗುರುತಿಸಲಾಯಿತು.

**ಪಾಟೀ ಸವಾಲುಃ ಆರೋಪಿ ಪರ ಶ್ರೀ ಟಿ.ಎ. ವಕೀಲರಿಂದಃ**

ದಿ.05.06.2022 ರಂದು ರಾ.9.00 ರ ಸಮಯಕ್ಕೆ ಚಾಸಾ-1 ರವರು ನಮ್ಮ ಆಸ್ಪತ್ರೆಗೆ ಚಿಕಿತ್ಸೆಗೆಂದು ಬಂದಿರುತ್ತಾರೆ. ಅವರೊಟ್ಟಿಗೆ ಯಾರು ಬಂದಿರುತ್ತಾರೆ ಎಂದು ನನಗೆ ಮಾಹಿತಿ ಬಂದಿರುವುದಿಲ್ಲ. ನಾನು ಚಾಸಾ-1 ರವರನ್ನು ಪರೀಕ್ಷಿಸಿ ಯಾವುದೇ ಗಾಯದ ಪ್ರಮಾಣ ಪತ್ರವನ್ನು ನೀಡಿರುವುದಿಲ್ಲ ಎಂದರೆ ಸರಿಯಲ್ಲ. ಪೋಲಿಸರ ಕೋರಿಕೆಯ ಮೇರೆಗೆ ಸುಳ್ಳು ಗಾಯದ ಪ್ರಮಾಣ ಪತ್ರವನ್ನು ನೀಡಿರುತ್ತೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆ ಇಲ್ಲ**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿ ಮುದ್ರಿಸಲಾಯಿತು)

ಓ ಹೇ ಕೇ ಸ ಇ ಎ ಒ.,

ಸಹಿ/-

ಸಾಕ್ಷಿ ಸಹಿಃ
ಸಂಯೋಜಕರುಃ

1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರದನ್ಯಾದಂ., ಮೂಡಿಗೆರೆ.